ದೂರವಾಣಿ ಸಂಖ್ಯೆ: 080-22212343
ಫ್ಯಾಕ್ಸ್ ಸಂಖ್ಯೆ : 080-22278803
ಅಂತರ್ಜಾಲ : www.kptcl.com
ಇ-ಮೇಲ್ ವಿಳಾಸ: director.ahr.kptcl@gmail.com

# ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ

ನಿಗಮದ ಗುರುತಿನ ಸಂಖ್ಯೆ(ಸಿ.ಐ.ಎನ್): ಯು40109ಕೆಎ1999ಎಸ್‌ಜಿಸಿ025521
ಕಂಪನಿಯ ಅಧಿಕೃತ ಕಛೇರಿ: ನಿಗಮ ಕಾರ್ಯಾಲಯ, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560009

**ಸಂಖ್ಯೆ: ಕವಿಪ್ರನಿನಿ/ಬಿ81/89615/2018-19** ದಿನಾಂಕ: 26 MAY 2023

## ಅಧಿಕೃತ ಜ್ಞಾಪನ

**ವಿಷಯ:** ಶ್ರೀ.ಎಸ್.ಹೆಚ್. ಮಿಟ್ಟಲಕೋಡ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಧಾರವಾಡ ರವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಕ ಮಾಡುವ ಬಗ್ಗೆ.

**ಉಲ್ಲೇಖ:** ಶ್ರೀ.ಎಸ್.ಹೆಚ್. ಮಿಟ್ಟಲಕೋಡ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಧಾರವಾಡ ರವರ ದಿನಾಂಕ:14.09.2022 ರ ಮನವಿ ಪತ್ರ.

-----

ಕವಿಪ್ರನಿನಿ ಮತ್ತು ವಿದ್ಯುತ್ ಸರಬರಾಜು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನಿಗಮದ ಅಧಿಕಾರಿ/ನೌಕರರ ವಿರುದ್ಧ ಅಗತ್ಯವಿದ್ದಲ್ಲಿ ಕವಿಪ್ರನಿನಿ ನೌಕರರ (ವರ್ಗೀಕರಣ, ಶಿಸ್ತು ನಿಯಂತ್ರಣ ಮತ್ತು ಮೇಲ್ಮನವಿ) ನಿಬಂಧನೆಗಳ ನಿಬಂಧನೆ-11 ರ ಅಡಿಯಲ್ಲಿ ಇಲಾಖಾ ವಿಚಾರಣೆಗಳನ್ನು ನಡೆಸಲು ಕಾಲ ಕಾಲಕ್ಕೆ ನಿವೃತ್ತ ನ್ಯಾಯಾಧೀಶರುಗಳನ್ನು ವಿಚಾರಣಾಧಿಕಾರಿಗಳನ್ನಾಗಿ ನೇಮಿಸಿ ವಿಚಾರಣಾಧಿಕಾರಿಗಳ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲಾಗಿರುತ್ತದೆ.

ಶ್ರೀ.ಎಸ್.ಹೆಚ್. ಮಿಟ್ಟಲಕೋಡ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಧಾರವಾಡ ರವರು ನಿಗಮದಲ್ಲಿ ವಿಚಾರಣಾಧಿಕಾರಿಗಳಾಗಿ ಕರ್ತವ್ಯ ನಿರ್ವಹಿಸಲು ಅವಕಾಶ ನೀಡುವಂತೆ ಉಲ್ಲೇಖದ ಮನವಿ ಪತ್ರವನ್ನು ಸಲ್ಲಿಸಿರುತ್ತಾರೆ. ಸದರಿಯವರ ಮನವಿಯನ್ನು ಪರಿಗಣಿಸಿ ನಿಗಮದಲ್ಲಿ ವಿಚಾರಣಾಧಿಕಾರಿಯಾಗಿ ಕಾರ್ಯನಿರ್ವಹಿಸಲು ಅನುಮೋದನೆಯನ್ನು ನೀಡಲಾಗಿದೆ. ಸದರಿ ನಿವೃತ್ತ ನ್ಯಾಯಾಧೀಶರ ಪ್ರಸ್ತುತ ವಿಳಾಸ ಹಾಗೂ ದೂರವಾಣಿ ಸಂಖ್ಯೆ ಈ ಕೆಳಕಂಡಂತಿರುತ್ತದೆ.

| ಹೆಸರು | ವಿಳಾಸ ಮತ್ತು ಮೊಬೈಲ್ ಸಂಖ್ಯೆ |
|---|---|
| ಶ್ರೀ.ಎಸ್.ಹೆಚ್. ಮಿಟ್ಟಲಕೋಡ,<br>ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು | ಎಮ್‌ಐಜಿ 2/78, ಕೆ.ಹೆಚ್.ಬಿ ಕಾಲೋನಿ,<br>ಡಿ.ಎನ್.ಕೊಪ್ಪ, ಧಾರವಾಡ-580008.<br>ಮೊಬೈಲ್ ಸಂಖ್ಯೆ: 9448769634 |

ಇಲಾಖಾ ವಿಚಾರಣೆಗಳನ್ನು ನಡೆಸುವ ವಿಚಾರಣಾಧಿಕಾರಿಗಳಿಗೆ ನಿಗಮದ ಅಧಿಕೃತ ಜ್ಞಾಪನ ಸಂಖ್ಯೆ: ಕವಿಪ್ರನಿನಿ/ಬಿ81/89615/2018-19 ದಿನಾಂಕ:08.01.2020 ರ ಪ್ರಕಾರ ಗೌರವ ಧನವನ್ನು ನೀಡಬಹುದಾಗಿರುತ್ತದೆ. ಮುಂದುವರೆದಂತೆ ವಿಚಾರಣಾಧಿಕಾರಿಗಳು ತಮ್ಮ ನಿವಾಸ ಸ್ಥಳವನ್ನು ಹೊರತುಪಡಿಸಿ ಬೇರೆ ಸ್ಥಳದಲ್ಲಿ ಇಲಾಖಾ ವಿಚಾರಣೆಗಳನ್ನು ನಡೆಸುವ ಸಂದರ್ಭಗಳಲ್ಲಿ, ನಿಗಮದ ಪ್ರವರ್ಗ-1 ರ ಅಧಿಕಾರಿಗಳಿಗೆ ನೀಡುವಂತೆಯೇ ದಿನ ಭತ್ಯೆಯನ್ನು ನೀಡತಕ್ಕದ್ದು.

**"ಮಾನ್ಯ ವ್ಯವಸ್ಥಾಪಕ ನಿರ್ದೇಶಕರು,
ಕವಿಪ್ರನಿನಿ ರವರಿಂದ ಅನುಮೋದಿಸಲ್ಪಟ್ಟಿದೆ."**

ನಿರ್ದೇಶಕರು (ಆ ಮತ್ತು ಮಾ.ಸಂ.)
ಕವಿಪ್ರನಿನಿ

ಪ್ರತಿಯನ್ನು ಮಾಹಿತಿಗಾಗಿ ರವಾನಿಸಿದೆ:

1. ವ್ಯವಸ್ಥಾಪಕ ನಿರ್ದೇಶಕರು, ಬೆಸ್ಕಾಂ/ಮೆಸ್ಕಾಂ/ಹೆಸ್ಕಾಂ/ಜೆಸ್ಕಾಂ/ಸೆಸ್ಕ್.
2. ಆರ್ಥಿಕ ಸಲಹೆಗಾರರು, ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
3. ಮುಖ್ಯ ಇಂಜಿನಿಯರ್(ವಿ), ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
4. ಪ್ರಧಾನ ವ್ಯವಸ್ಥಾಪಕರು(ಸಿಬ್ಬಂದಿ)/(ತಾಂತ್ರಿಕ), ನಿಗಮ ಕಾರ್ಯಾಲಯ, ಕವಿಪ್ರನಿನಿ, ಬೆಂಗಳೂರು.
5. ಶ್ರೀ.ಎಸ್.ಹೆಚ್. ಮಿಟ್ಟಲಕೋಡ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಎಮ್ಐಜಿ 2/78, ಕೆ.ಹೆಚ್.ಬಿ ಕಾಲೋನಿ, ಡಿ.ಎನ್.ಕೊಪ್ಪ, ಧಾರವಾಡ–580008.
6. ಹಿರಿಯ ಆಪ್ತ ಕಾರ್ಯದರ್ಶಿಗಳು, ವ್ಯವಸ್ಥಾಪಕ ನಿರ್ದೇಶಕರು/ನಿರ್ದೇಶಕರು(ಹಣಕಾಸು)/ನಿರ್ದೇಶಕರು (ಪ್ರಸರಣ)/ನಿರ್ದೇಶಕರು(ಆಡಳಿತ ಮತ್ತು ಮಾನವ ಸಂಪನ್ಮೂಲ ಅಭಿವೃದ್ಧಿ), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.

   www.kptcl.com/eprasarana for information of:

7. ಅಧೀಕ್ಷಕ ಇಂಜಿನಿಯರ್(ವಿ) ಗಳು, ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
8. ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಗಳು, ಕವಿಪ್ರನಿನಿ/ವಿದ್ಯುತ್ ಸರಬರಾಜು ಕಂಪನಿಗಳು.
9. ವ್ಯವಸ್ಥಾಪಕರು(ವಿಚಾರಣೆಗಳು–1/ಸಿಬ್ಬಂದಿ–1/ಸಿಬ್ಬಂದಿ–2/ಕಾನೂನು/ಆಂತರಿಕ ನಿರ್ವಹಣೆ), ನಿಗಮ ಕಾರ್ಯಾಲಯ, ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.
10. ಲೆಕ್ಕಾಧಿಕಾರಿ(ಆಂತರಿಕ ತನಿಖೆ), ಕವಿಪ್ರನಿನಿ, ಕಾವೇರಿ ಭವನ, ಬೆಂಗಳೂರು.